(ಆ) ಹೊಸಪೇಟೆ ತಾಲ್ಲೂಕು ಅಮರಾವತಿ ಗ್ರಾಮದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣಕ್ಕಾಗಿ ನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರವು ನಗರ ಮಹಾ ಯೋಜನೆ (ಸಿ.ಡಿ.ಪಿ) ಯಲ್ಲಿ 37.82 ಎಲರೆ ಪ್ರದೇಶವನ್ನು ಗುರುತಿಸಿದೆ.

ಈ ಯೋಜನೆಯ ಒಟ್ಟು ಅಂದಾಜು ವೆಚ್ಚ 56.46 ಕೋಟಿ ರೂ.ಗಳಾಗಿದ್ದು, 2014–15ನೇ ಸಾಲಿನ ಆಯವ್ಯಯದಲ್ಲಿ 18.00 ಕೋಟಿ ರೂ.ಗಳನ್ನು ಒದಗಿಸಿದೆ.

(ಇ) ಯೋಜನೆಯ ನಕ್ಷೆಯನ್ನು ಸಿದ್ದಪಡಿಸಿ ಅನುಮೋದನೆಗಾಗಿ ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ ಇವರಿಗೆ ಸಲ್ಲಿಸಿದ್ದು, ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. ಮುಂದುವರೆದು, ಯೋಜನಾ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿಯ ನಾಲ್ಕು ಪಥಗಳ ರಸ್ತೆಯು ಹಾದು ಹೋಗಿರುವುದರಿಂದ ಸದರಿ ಕಾಮಗಾರಿಯ ಸಂದರ್ಭದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳುವಲ್ಲಿ ವಿಳಂಬವಾಗಿದೆ. ಪ್ರಸ್ತುತ ಹೆದ್ದಾರಿ ಕಾಮಗಾರಿ ಪೂರ್ಣಗೊಂಡಿದ್ದು, 2014–15ನೇ ಸಾಲಿನಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದು ಕಾಮಗಾರಿಯನ್ನು ವಿವಿಧ ಹಂತಗಳಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆಯ ಕೊಳವೆ ಬಾವಿಗಳು:

737 (1264); ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

(ಅ) ಕಳೆದ ಮೂರು ವರ್ಷಗಳಲ್ಲಿ ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯ ಅಡಿಯಲ್ಲಿ ವೈಯಕ್ತಿಕ ಹಾಗೂ ಸಾಮೂಹಿಕ ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆಯೇ; (ವಿವರಗಳನ್ನು ನೀಡುವುದು)

(ಆ) ಹಾಗಿದ್ದಲ್ಲಿ ಮಂಜೂರು ಮಾಡಿರುವ ಕೊಳವೆಬಾವಿಗಳ ಕಾಮಗಾರಿಗಳು ಪೂರ್ಣಗೊಂಡಿವೆಯೇ ಹಾಗೂ ಇವುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುವುದೇ? (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

(ಅ) ಹೌದು. ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ವರ್ಷ	ಮಂಜೂರು ಮಾಡಿರುವ ಕೊಳವೆ ಬಾವಿಗಳ ಸಂಖ್ಯೆ
1	2011–12	35
2	2012–13	45
3	2013–14	30
	ಒಟ್ಟು	**110**

ಸಾಮೂಹಿಕ ಕೊಳವೆ ಬಾವಿಗಳನ್ನು ಮಂಜೂರು ಮಾಡಿರುವುದಿಲ್ಲ.

(ಆ)

ಕ್ರ. ಸಂ.	ವರ್ಷ	ಕೊರೆದ ಕೊಳವೆ ಬಾವಿಗಳ ಸಂಖ್ಯೆ	ಕಾಮಗಾರಿ ಪೂರ್ಣಗೊಂಡಿರುವ ಕೊಳವೆಬಾವಿಗಳ ಸಂಖ್ಯೆ	ವಿದ್ಯುತ್ ಸಂಪರ್ಕ ಕಲ್ಪಿಸಿರುವ ಸಂಖ್ಯೆ
1	2011–12	32	21	21
2	2012–13	35	12	12
3	2013–14	42	09	09
	ಒಟ್ಟು	**109**	**45**	**45**